DECEMBER 20, 2024

AKASHAVANI - DHARWAD

PRADESH SAAMACHARA (KANNADA) 12 P.M

<><><>

Akashvani

Regional News Bulletin 20.12.2024

<><><>

ಮಂಡ್ಯದಲ್ಲಿ ಇಂದಿನಿಂದ ಮೂರು ದಿನಗಳ ಕಾಲ ಆಯೋಜಿತ, 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸಮ್ಮೇಳನಾಧ್ಯಕ್ಷರ ಮೆರವಣಿಗೆಗೆ, ಆದಿಚುಂಚನಗಿರಿ ಮಠಾಧೀಶರಾದ ನಿರ್ಮಲಾನಂದನಾಥ ಸ್ವಾಮೀಜಿ ಮಂಡ್ಯ ನಗರದ ಪ್ರವಾಸಿ ಮಂದಿರದ ಬಳಿ ಚಾಲನೆ ನೀಡಿದರು. ಸರ್ವಾಧ್ಯಕ್ಷ ಗೊ.ರು.ಚನ್ನಬಸಪ್ಪ ಅವರು, ತೆರೆದ ವಾಹನದಲ್ಲಿ ಕಲೆ ಮತ್ತು ಸಾಂಸ್ಕೃತಿಕ ತಂಡದೊಂದಿಗೆ ಮೆರವಣಿಗೆಯಲ್ಲಿ ಸಾಗಿದರು. ವೇದಿಕೆ ಬಳಿ, ರಾಷ್ಟ್ರ ಧ್ವಜಕ್ಕೆ ಸಚಿವ ಎನ್.ಚಲುವರಾಯಸ್ವಾಮಿ, ರಾಜ್ಯ ಧ್ವಜಕ್ಕೆ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾಕ್ಟರ್ ಮಹೇಶ್ ಜೋಷಿ, ಕನ್ನಡ ಸಾಹಿತ್ಯ ಪರಿಷತ್ ಧ್ವಜಕ್ಕೆ ಸಂಚಾಲಕಿ ಮೀರಾ ಶಿವಲಿಂಗಯ್ಯ ಧ್ವಜಾರೋಹಣ ನೆರವೇರಿಸಿದರು.

<><><>

ಅನಿರ್ದಿಷ್ಟಾವಧಿಗೆ ನಿನ್ನೆ ಮುಂದೂಡಲ್ಪಟ್ಟ, ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಆಯೋಜಿಸಿದ್ದ, ವಿಧಾನಮಂಡಲ ಚಳಿಗಾಲದ ಅಧಿವೇಶದಲ್ಲಿ, ವಿಧಾನ ಪರಿಷತ್ತಿನಲ್ಲಿ ಚರ್ಚೆಯ ಸಂದರ್ಭದಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ ಅವರ ವಿರುದ್ಧ, ಪರಿಷತ್ ಸದಸ್ಯ ಸಿ.ಟಿ. ರವಿ ಅವರು ಆಕ್ಷೇಪಾರ್ಹ ಪದವನ್ನು, ಬಳಕೆ ಮಾಡಿದ, ದಾಖಲೆ ಇದೆ ಎಂದು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದರು.

<><><>

ಬಿಜೆಪಿ ರಾಜ್ಯಧ್ಯಕ್ಷ ಬಿ.ವೈ. ವಿಜಯೇಂದ್ರ, ಬೆಳಗಾವಿ ವಿಮಾನ ನಿಲ್ದಾಣದಲ್ಲಿ, ಸುದ್ದಿಗಾರರೊಂದಿಗೆ ಮಾತನಾಡಿ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು, ಸದಸ್ಯ ಸಿ.ಟಿ. ರವಿ ಅವರು, ಆಕ್ಷೇಪಾರ್ಹ ಪದ ಬಳಕೆ ಮಾಡಿರುವ, ಯಾವುದೇ ದಾಖಲೆಗಳಿಲ್ಲ ಎಂದು ರೂಲಿಂಗ್ ಕೊಟ್ಟ ಬಳಿಕ, ಪೊಲೀಸರು ಸಿ.ಟಿ. ರವಿ ಅವರನ್ನು ಬಂಧಿಸಿದ ಕಾರಣವೇನು? ಎಂದು ಆಕ್ಷೇಪಿಸಿದರು. ಮಹಿಳೆಯ ಘನತೆಗೆ ಧಕ್ಕೆಯಾಗಿರುವ ಆರೋಪ ಗಂಭೀರ ಸ್ವರೂಪದ್ದು. ಸತ್ಯಾಸತ್ಯತೆಯ ಬಗ್ಗೆ, ಸಂಪೂರ್ಣ ತನಿಖೆಯಾಗಬೇಕು. ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುವ ವಿಡಿಯೋ, ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಿ, ವರದಿ ಪಡೆಯಬೇಕು ಎಂದು ಅವರು ಒತ್ತಾಯಿಸಿದರು.

ವಿಧಾನಸಭೆ ವಿಪಕ್ಷ ನಾಯಕ, ಆರ್. ಅಶೋಕ ಮಾತನಾಡಿ, ಸಿ.ಟಿ. ರವಿ ಅವರು ಆಕ್ಷೇಪಾರ್ಹ ಪದ ಬಳಕೆ ಮಾಡಿಲ್ಲ. ಪೊಲೀಸರು ಅವರ ಮೇಲೆ ಒತ್ತಡ ಹೇರಿರುವುದು ಕಾನೂನು ಬಾಹಿರ ಎಂದರು.

ಬೆಳಗಾವಿಯ ಮುತಗಾ ಆಸ್ಪತ್ರೆಯಲ್ಲಿ ಸಿ.ಟಿ. ರವಿ ಅವರ ಆರೋಗ್ಯ ತಪಾಸಣೆ ಬಳಿಕ, ನ್ಯಾಯಾಲಯಕ್ಕೆ ಹಾಜರು ಪಡಿಸಲು, ಪೊಲೀಸರು ಸಿದ್ಧತೆ ಕೈಗೊಂಡಿದ್ದಾರೆ.

ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಅವರು, ಬೆಳಗಾವಿಯಲ್ಲಿ ಇಂದು ಬೆಳಗ್ಗೆ ಸುದ್ದಿಗೋಷ್ಠಿ ನಡೆಸಿ, ವಿಧಾನ ಪರಿಷತ್ ಸಭಾಪತಿ ಅವರಿಗೆ ಲಿಖಿತ ದೂರು ನೀಡಿದ್ದು, ಕಾನೂನು ಕ್ರಮ ಕೈಗೊಳ್ಳಲು ಆಗ್ರಹಿಸಿದ್ದಾಗಿ, ತಿಳಿಸಿದರು. ಈ ವಿಷಯ ತುಂಬ ದುಃಖ ತಂದಿದೆ ಎಂದರು.

<><><>

ಬಳ್ಳಾರಿಯ ಜಿಲ್ಲಾ ಆಸ್ಪತ್ರೆ ಹಾಗೂ ಬಿಮ್ಸ್‌ನಲ್ಲಿ, ಐವರು ಬಾಣಂತಿಯರ ಸಾವಿನ ಪ್ರಕರಣವನ್ನು, ನಿವೃತ್ತ ನ್ಯಾಯಾಧೀಶರ ಸಮಿತಿ, ವಿಚಾರಣೆ ನಡೆಸಿ, ಸರ್ಕಾರಕ್ಕೆ ಸಮಗ್ರ ವರದಿ ಸಲ್ಲಿಸಲಿದೆ ಎಂದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ ಗುಂಡೂರಾವ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ, ನಿಯಮ 69 ರ ಅಡಿ, ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಬಾಣಂತಿಯರ ಸಾವಿನ ಪ್ರಕರಣ ಕುರಿತು ನಡೆದ ಚರ್ಚೆಗೆ, ಅವರು ಉತ್ತರಿಸಿದರು. ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರ ವಹಿಸಲಾಗುವುದು ಎಂದರು.

<><><>

ರಾಜ್ಯದಲ್ಲಿ ಅರಣ್ಯ ಹಕ್ಕು ಕಾಯ್ದೆಯಡಿ, ಒಟ್ಟು 2 ಲಕ್ಷ 99 ಸಾವಿರದ 387 ಅರ್ಜಿಗಳು ಸ್ವೀಕೃತವಾಗಿದ್ದು, 16 ಸಾವಿರದ 665 ಪ್ರಕರಣಗಳಲ್ಲಿ, ಹಕ್ಕು ಪತ್ರ ವಿತರಿಸಲಾಗಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನ ಪರಿಷತ್‌ಗೆ, ಲಿಖಿತವಾಗಿ ಉತ್ತರಿಸಿದ್ದಾರೆ. ಶಾಸಕ, ಉತ್ತರಕನ್ನಡ ಜಿಲ್ಲೆ, ಯಲ್ಲಾಪುರದ ಶಾಂತರಾಮ ಸಿದ್ದಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿರುವ ಮುಖ್ಯಮಂತ್ರಿಯವರು, ಒಟ್ಟು 2 ಲಕ್ಷ 59 ಸಾವಿರದ 199 ಅರ್ಜಿಗಳು ತಿರಸ್ಕೃತವಾಗಿವೆ. 23 ಸಾವಿರದ 583 ಅರ್ಜಿಗಳು ಮಾತ್ರ ಬಾಕಿ ಇವೆ ಎಂದು ತಿಳಿಸಿದ್ದಾರೆ.

<><><>

ಬೀದರ ಕಾರಂಜಾ ಜಲಾಶಯ ಯೋಜನೆಯ ಸಂತ್ರಸ್ತರಿಗೆ, ಹೆಚ್ಚಿನ ಪರಿಹಾರ ನೀಡುವ ಕುರಿತ ಬೇಡಿಕೆ ಪರಿಶೀಲನೆಗೆ, ತಾಂತ್ರಿಕ ಸಮಿತಿ ರಚಿಸಲಾಗುವುದು ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ. ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ, ಕಾರಂಜಾ ಯೋಜನೆ ಸಂತ್ರಸ್ತರ ಜೊತೆ, ಸಮಾಲೋಚಿಸಿದರು. ಕಾರಂಜಾ ಜಲಾಶಯ ನಿರ್ಮಾಣಕ್ಕೆ 1972–73 ರಲ್ಲಿ ಭೂ ಸ್ವಾಧೀನವಾಗಿತ್ತು. ನ್ಯಾಯಾಲಯದ ಮೊರೆ ಹೋಗದ ರೈತರಿಗೆ, ಹೆಚ್ಚುವರಿ ಪರಿಹಾರ ಲಭಿಸಲಿಲ್ಲ ಎಂದು, ಸಚಿವ ಈಶ್ವರ ಖಂಡ್ರೆ ತಿಳಿಸಿದರು.

<><><>

ದಾವಣಗೆರೆಯಲ್ಲಿ ಆಯೋಜಿಸಿದ್ದ, ಕೆ.ಎಸ್.ಆರ್.ಟಿ.ಸಿ. ಬಸ್ ಚಾಲಕರು ಮತ್ತು ನಿರ್ವಾಹಕರಿಗೆ. ಪ್ರಥಮ ಚಿಕಿತ್ಸೆಯ ತರಬೇತಿ ಕಾರ್ಯಾಗಾರಕ್ಕೆ, ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಚಾಲನೆ ನೀಡಿದರು.

<><><>

ಬಾಗಲಕೋಟೆ ತೋಟಗಾರಿಕೆ ವಿಶ್ವವಿದ್ಯಾಲಯದ, ಉದ್ಯಾನಗಿರಿಯ ಮುಖ್ಯ ಆವರಣದಲ್ಲಿ, ನಾಳೆಯಿಂದ ಮೂರು ದಿನಗಳ ವರೆಗೆ, ತೋಟಗಾರಿಕೆ ಮೇಳ ಆಯೋಜಿತವಾಗಿದೆ.

**<><><>**

ಗದಗ ಜಿಲ್ಲೆಯ ಹುಲಕೋಟಿ ಗ್ರಾಮದ ಕೃಷಿ ವಿಜ್ಞಾನ ಕೇಂದ್ರದ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನಿರುದ್ಯೋಗಿ ಯುವಕ, ಯುವತಿಯರಿಗಾಗಿ ಹೈನುಗಾರಿಕೆ ಮತ್ತು ಎರೆಹುಳ ಗೊಬ್ಬರ ತಯಾರಿಕೆ ತರಬೇತಿ ಶಿಬಿರ ಬರುವ ಜನೇವರಿ 2 ರಂದು ಜರುಗಲಿದೆ. ಹೆಚ್ಚಿನ ಮಾಹಿತಿಗಾಗಿ ಹುಲಕೋಟಿ ಕೃಷಿ ವಿಜ್ಞಾನ ಕೇಂದ್ರದ ನಿರ್ದೇಶಕರನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ಕೋರಲಾಗಿದೆ. (36)

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

**<><><>**